# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗದ,

## ವಾರ್ಡ್ ನಂ.72, ಹೇರೋಹಳ್ಳಿ, ಬೆಂಗಳೂರು-5600 91.

---

ಸಂಖ್ಯೆ: .ಸ.ಅ: ಹೇ.ವಾ.ಕ: ಪಿಆರ್/27/2020-21 ದಿನಾಂಕ : 21-10-2021

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.72ರಲ್ಲಿ ದಿನಾಂಕ: 21.10.2021 ರಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.**

ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಹಾಜಾರಾಗಿದ್ದವರ ವಿವರಗಳು

| ಕ್ರ.ಸಂ | ಹೆಸರು | ಪದನಾಮ |
|---|---|---|
| 01 | ಶ್ರೀ. ಎಸ್ ಆರ್ ಪ್ರಕಾಶ್ | ವಾರ್ಡ ಸಮಿತಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು. |
| 02 | ಶ್ರೀ ಚಿತ್ತಯ್ಯ | ಸಹಾಯಕ ಅಭಿಯಂತರರು ಮತ್ತು ಸದಸ್ಯ ಕಾರ್ಯದರ್ಶಿ ವಾರ್ಡ.72 ಹೇರೋಹಳ್ಳಿ. |
| 03 | ಶ್ರೀ ಶ್ರೀಕಾಂತ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 04 | ಶ್ರೀ ಮಹಾಂತೇಶ್ | ಕಿರಿಯ ಅಭಿಯಂತರರು, ಬೆಸ್ಕಾಂ. |
| 05 | ಶ್ರೀ ಹನುಮಂತರಾಜು | ಹಿರಿಯ ಆರೋಗ್ಯ ಪರಿವೀಕ್ಷಕರು. |
| 06 | ಶ್ರೀ ವಿಜಯ | ಕಿರಿಯ ಆರೋಗ್ಯ ಪರಿವೀಕ್ಷಕರು. |
| 07 | ಶ್ರೀ ಪ್ರದೀಪ್ | ಆರೋಗ್ಯ ಪರಿವೀಕ್ಷಕರು, ಸರ್ಕಾರಿ ಆಸ್ಪತ್ರೆ |
| 08 | ಶ್ರೀ ಗೋವಿಂದಯ್ಯ | ಕಿರಿಯ ಅಭಿಯಂತರರು, ಬೆಸ್ಕಾಂ. |
| 09 | ಶ್ರೀ ಹನುಮಂತರಾಯಪ್ಪ | ಸಹಾಯಕ ಕಂದಾಯ ಅಧಿಕಾರಿಗಳ ಪರವಾಗಿ. |
| 10 | ಶ್ರೀ ಎಸ್ ಎಂ ಜಯರಾಮ್ | ಬೆಸ್ಕಾಂ |
| 11 | ಶ್ರೀ ಮುತ್ತಪ್ಪ | ವಾರ್ಡ್ ಸಮಿತಿ ಸದಸ್ಯರು. |
| 12 | ಶ್ರೀ ರಾಮಕೃಷ್ಣ ಭಟ್ಟ | ವಾರ್ಡ್ ಸಮಿತಿ ಸದಸ್ಯರು. |
| 13 | ಶ್ರೀ ರಘುಚಂದ್ರ ಶೆಟ್ಟಿ | ವಾರ್ಡ್ ಸಮಿತಿ ಸದಸ್ಯರು. |
| 14 | ಶ್ರೀ ಸಿ.ಟಿ ನರಸೇಗೌಡ | ವಾರ್ಡ್ ಸಮಿತಿ ಸದಸ್ಯರು. |

ವಾರ್ಡ ಸಮಿತಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ. ಎಸ್ ಆರ್ ಪ್ರಕಾಶ್ ರವರು ಮತ್ತು ಸಹಾಯಕ ಅಭಿಯಂತರರು ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಚಿತ್ತಯ್ಯ ರವರು ಸಭೆಗೆ ಹಾಜರಿದ್ದು ಎಲ್ಲರಿಗೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ, ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡಾ ವಿಷಯಗಳ ಬಗ್ಗೆ ತಿಳಿಸಿದರು.

**ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿ ಇಲಾಖೆಗೆ ಚರ್ಚಿಸಲಾದ ವಿಷಯಗಳು:-**

ವಾರ್ಡ ಸಂಖ್ಯೆ :72ಕ್ಕೆ ಸಂಬಂಧಿಸಿದಂತೆ, ಸದಸ್ಯರಾದ ಶ್ರೀ ರಾಮಕೃಷ್ಣ ರವರು ಮಾತನಾಡಿ ತುಂಗಾನಗರ ಮುಖ್ಯರಸ್ತೆಯಲ್ಲಿ ಚೇಂಬರ್ ಕವರ್ ಹಾಳಾಗಿದ್ದು ಕೂಡಲೇ ಚೇಂಬರ್ ಕವರ್ ಹಾಕಲು ಕೇಳಿಕೊಂಡರು. ಮತ್ತು ಸದಸ್ಯರಾದ ಲೋಕೇಶ್ ರವರು ಮಾತನಾಡಿ ಸಿಂಡಿಕೇಟ್ ಬ್ಯಾಂಕ್ ಬಡಾವಣೆಯಲ್ಲಿ ರಸ್ತೆ ತುಂಬಾ ಹಾಳಾಗಿದ್ದು, ಸಾರ್ವಜನಿಕರಿಗೆ ಸಂಚಾರಕ್ಕೆ ತುಂಬಾ ಸಮಸ್ಯೆಯಾಗಿದೆ ಎಂದು ತಿಳಿಸಿದರು. ತುಂಗಾನಗರದಿಂದ ಹೊಸಹಳ್ಳಿಗೆ ಹೋಗುವ ರಸ್ತೆ ತುಂಬಾ ಹಾಳಾಗಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಲಾಯಿತು. ಈ ಬಗ್ಗೆ ಅಧ್ಯಕ್ಷರು ಕೂಡಲೇ ಕ್ರಮವಹಿಸಲು ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಿದರು.

**ಆರೋಗ್ಯ ಇಲಾಖೆ ಬಿಬಿಎಂಪಿ :-**

ಕಳೆದ ಸಭೆಯಲ್ಲಿ ಶ್ರೀ ಎಸ್ ಆರ್ ಪ್ರಕಾಶ್, ವಾರ್ಡ ಅಧ್ಯಕ್ಷರು ಮಾತನಾಡಿ ಆಟೋಗಳಲ್ಲಿ ಕಸ ಸಂಗ್ರಹಣೆ ಮಾಡಿಕೊಂಡು ಬರುವಾಗ ರಸ್ತೆಯಲ್ಲಿಯೇ ಚೆಲ್ಲಾಪಿಲ್ಲಿಯಾಗಿ ಬೀಳಿಸಿಕೊಂಡು ಹೋಗುತ್ತಾರೆ ಎಂದು ಸರ್ವಜನಿಕರಿಂದ ದೂರವಾಣಿ ಮೂಲಕ ದೂರು ಬಂದಿರುವುದಾಗಿ ತಿಳಿಸುತ್ತಾ, ಸಂಬಂಧಪಟ್ಟ ಅಧಿಕಾರಿಯಾದ ಹನುಮಂತರಾಯಪ್ಪ ಮತ್ತು ವಿಜಯ ರವರಿಗೆ ಮುಂದೆ ಈ ರೀತಿ

ದೂರು ಬರದಂತೆ ಕ್ರಮವಹಿಸಲು ಸೂಚಿಸಿದ್ದರು. ಸದರಿ ದೂರಿನ ಬಗ್ಗೆ ಕ್ರಮವಹಿಸಲಾಗಿದೆ ಎಂದು ಸಂಬಂಧಪಟ್ಟ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು

**ಬಿ.ಡಬ್ಲ್ಯೂ.ಎಸ್.ಎಸ್.ಬಿ:-**

ವಾರ್ಡ್ : 72ರ ವ್ಯಾಪ್ತಿಯಲ್ಲಿ ಕಾವೇರಿ ನೀರು ಸಮರ್ಪಕವಾಗಿ ಬಿಡುತ್ತಿಲ್ಲವೆಂದು ಸದಸ್ಯರು ಸಭೆಯಲ್ಲಿ ತಿಳಿಸಿದರು ಹಾಗೂ ಈ ಬಗ್ಗೆ ಸಂಬಂಧಪಟ್ಟ ಜಲ ಪರೀಕ್ಷಕರಿಗೆ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

**ಆಸ್ಪತ್ರೆ ವೈದ್ಯಾಧಿಕಾರಿಗಳಿಗೆ:-**

ವಾರ್ಡ್:72 ರ ವ್ಯಾಪ್ತಿಯಲ್ಲಿ ಈಗ ಕೋವಿಡ್-19 ಸೋಂಕು ನಿಯಂತ್ರಣದಲ್ಲಿದ್ದು, ಯಾವುದೇ ಪ್ರಕರಣಗಳು ಕಂಡು ಬರುತ್ತಿಲ್ಲ ಎಂದು ಈ ಬಗ್ಗೆ ಶ್ರೀ ಎಲ್ ಪ್ರದೀಪ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರವರು ಸಭೆಯಲ್ಲಿ ಮಾತನಾಡಿದರು.

**ಅಧ್ಯಕ್ಷರು ಮಾತನಾಡಿ ಎಲ್ಲ ಇಲಾಖ ಅಧಿಕಾರಿಗಳು ಮುಂದಿನ ವಾರ್ಡ ಕಮಿಟಿ ಸಭೆಗೆ ಕಡ್ಡಾಯವಾಗಿ ಹಾಜಾರಾಗಬೇಕೆಂದು** ತಿಳಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಿದರು.

**ವಂದಾನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.**

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 72. ಹೇರೋಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಸಹಿ/-
ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ 72 ಹೇರೋಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:-

ಅಧಿಕಾರಿಗಳ ಮಾಹಿತಿಗಾಗಿ

1. ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ, ರವರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು, ರಾ.ರಾ.ನಗರ ವಲಯ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು, ರಾ.ರಾ.ನಗರ ವಲಯ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಸಲ್ಲಿಸಿದೆ.
6. ಉಪ ನಿಯಂತ್ರಕರು (ಹಣಕಾಸು), ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಕೆಂ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಆರೋಗ್ಯ ವೈದ್ಯಾಧಿಕಾರಿಗಳು ಯಶವಂತಪುರ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ನಿರ್ದೇಶಕರು, (ಪಶು ಸಂಗೋಪನೆ) ಇಲಾಖೆ ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೇ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ರವರ ಮಾಹಿತಿಗಾಗಿ ಕಳುಹಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
14. ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.72, ಹೇರೋಹಳ್ಳಿ ರವರ ಮಾಹಿತಿಗಾಗಿ ಕಳುಹಿಸಿದೆ.
15. ಪೋಲೀಸ್ ಇನ್‌ಸ್ಪೆಕ್ಟರ್, ಬ್ಯಾಡರಹಳ್ಳಿ ರವರ ಮಾಹಿತಿಗಾಗಿ ಕಳುಹಿಸಿದೆ.

ಗೈರು ಹಾಜರಾದ ಅಧಿಕಾರಿಗಳ ಮಾಹಿತಿಗಾಗಿ.

1. ವಲಯ ಅರಣ್ಯಾಧಿಕಾರಿಗಳು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳು ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
3. ತೋಟಗಾರಿಕೆ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
4. ಸಹಾಯಕ ನಿರ್ದೇಶಕರು, (ಪಶು ಸಂಗೋಪನೆ) ಇಲಾಖೆ ರವರ ಮಾಹಿತಿಗಾಗಿ ಸಲ್ಲಿಸಿದೆ.